ಸದನದಲ್ಲಿ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ : 26ನೇ ಜುಲೈ, 2019

ಗದಗ ಜಿಲ್ಲೆಯ ನರೇಗಲ್ ಪಟ್ಟಣ ಪಂಚಾಯಿತಿಯ ದ್ಯಾಂಪೂರ ಹತ್ತಿರ ರೂಪಿಸಲಾದ ಪ್ರಧಾನಮಂತ್ರಿ ಆವಾಸ್ ಯೋಜನೆಯ ಕುರಿತು

ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) -

137 (812) ವಸತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಗದಗ ಜಿಲ್ಲೆಯ ನರೇಗಲ್ ಪಟ್ಟಣ ಪಂಚಾಯಿತಿಯ ದ್ಯಾಂಪೂರ ಹತ್ತಿರ ಪ್ರಧಾನ ಮಂತ್ರಿ ಆವಾಜ್ ಯೋಜನೆಯಡಿ ಎಷ್ಟು ಮನೆಗಳನ್ನು ನಿರ್ಮಿಸಿ ವಿತರಿಸಲು ಯೋಜನೆಯನ್ನು ರೂಪಿಸಿದೆ ; ಈ ಯೋಜನೆಗೆ ಎಷ್ಟು ಭೂಮಿಯನ್ನು ಯಾವಾಗ ಖರೀದಿಸಲಾಗಿದೆ ; (ವಿವರ ನೀಡುವುದು)

(ಆ) ಪ್ರಧಾನ ಮಂತ್ರಿ ಆವಾಸ್ ಯೋಜನೆಗೆ ಕ್ರಿಯಾ ಯೋಜನೆಯನ್ನು ತಯಾರಿಸಲಾಗಿದೆಯೇ ; ಇದರಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಪಾಲು ಎಷ್ಟು ;

(ಇ) ಈ ಯೋಜನೆಯಡಿ ಈಗಾಗಲೇ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ಮತ್ತು ಇನ್ನುಳಿದ ಮನೆಗಳನ್ನು ಯಾವಾಗ ನಿರ್ಮಿಸಿ ಪೂರ್ಣಗೊಳಿಸಲಾಗುವುದು ;

(ಈ) ಈ ವಸತಿ ಯೋಜನೆಯಡಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆಯೇ; ಮತ್ತು ಸಂಬಂಧಪಟ್ಟ ಫಲಾನುಭವಿಗಳಿಗೆ ಹಕ್ಕು ಪತ್ರ ವಿತರಿಸಲಾಗಿದೆಯೇ? (ಸಂಪೂರ್ಣ ಮಾಹಿತಿ ನೀಡುವುದು)